# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿವಿಧ ಕೈಗಾರಿಕೆಗಳ / ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ 2020-21ನೇ ಸಾಲಿನ ವ್ಯತ್ಯಸ್ಥ ತುಟ್ಟಿಭತ್ಯೆ (V.D.A) ಏರಿಕೆಯ ಮೊತ್ತ ಪಾವತಿಸುವುದನ್ನು ಮುಂದೂಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಇವರ ಅ.ಸ. ಪತ್ರ ಸಂಖ್ಯೆ: CI/2020-21, ದಿನಾಂಕ: 22-04-2020.
2. ಕಾರ್ಮಿಕ ಆಯುಕ್ತರ ಪತ್ರ ಸಂಖ್ಯೆ: ಕವೇಕಾ-2/ ಇತರೆ-1/ವಿಡಿಎ/ವಿನಾಯಿತಿ/ 20-21, ದಿನಾಂಕ: 29-05-2020.
3. ದಿನಾಂಕ: 26.05.2020ರಂದು ಕಾರ್ಮಿಕ ಸಂಘಟನೆಗಳು ಮತ್ತು ಮಾಲೀಕ ಸಂಘಟನೆಗಳ ಪ್ರತಿನಿಧಿಗಳನ್ನೊಳಗೊಂಡಂತೆ ನಡೆಸಿರುವ ಸಭೆಯ ನಡವಳಿಗಳು.

********

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಅ.ಸ. ಪತ್ರದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಇವರು ಕೋವಿಡ್-19 ಸಾಂಕ್ರಾಮಿಕ ರೋಗದ ಹರಡುವಿಕೆಯ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ವಿಧಿಸಿರುವ ಲಾಕ್ ಡೌನ್ ಅವಧಿಯಲ್ಲಿ ಉದ್ದಿಮೆಗಳನ್ನು ಸ್ಥಗಿತಗೊಳಿಸಿದ್ದ ಪರಿಣಾಮದಿಂದಾಗಿ ಭಾರೀ ಆರ್ಥಿಕ ಹೊರೆ ಉಂಟಾಗಿದ್ದು, ಕಾರ್ಮಿಕರಿಗೆ ವೇತನ ಪಾವತಿಸುವುದೇ ಕಷ್ಟವಾಗಿರುವುದರಿಂದ, ಕಾರ್ಮಿಕರಿಗೆ ಕನಿಷ್ಠ ವೇತನ / ವ್ಯತ್ಯಸ್ಥ ತುಟ್ಟಿಭತ್ಯೆ ಪಾವತಿಸುವುದನ್ನು 4 ತಿಂಗಳ ಅವಧಿಯವರೆಗೆ ಮುಂದೂಡಬೇಕಾಗಿ ವಿವಿಧ ಉದ್ದಿಮೆಗಳ ಆಡಳಿತ ವರ್ಗದವರು ಕೋರಿರುವುದಾಗಿ ಕಾರ್ಮಿಕ ಇಲಾಖೆಗೆ ಮುಂದಿನ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಮೇಲೆ ಓದಲಾದ (2)ರ ಕಾರ್ಮಿಕ ಆಯುಕ್ತರ ಪತ್ರದಲ್ಲಿ 2020-21 ಸಾಲಿಗೆ ಗ್ರಾಹಕ ಬೆಲೆ ಸೂಚ್ಯಾಂಕವು 348 ಅಂಕಗಳ ಏರಿಕೆಯಾಗಿದ್ದು, ಪ್ರತಿ ಅಂಶ/ ಸೂಚ್ಯಂಕಕ್ಕೆ 4 ಪೈಸೆಯಂತೆ ಲೆಕ್ಕ ಹಾಕಿದಲ್ಲಿ ಮಾಸಿಕ ರೂ. 417.60 ಹಾಗೂ ದಿನಕ್ಕೆ ರೂ. 16.06 ಆಗಿದ್ದು, ದಿನಾಂಕ: 01-04-2020 ರಿಂದ ಅನ್ವಯವಾಗುವಂತೆ ಪಾವತಿಸಬೇಕಾಗಿರುವುದಾಗಿ ತಿಳಿಸಿರುತ್ತಾರೆ. ಅದರನ್ವಯ, ಮೇಲೆ ಓದಲಾದ (3)ರ ಕಾರ್ಮಿಕ ಸಂಘಟನೆಗಳು ಮತ್ತು ಮಾಲೀಕ ಸಂಘಟನೆಗಳ ಪ್ರತಿನಿಧಿಗಳನ್ನೊಳಗೊಂಡ ಸಭೆಯ ನಡವಳಿಯಲ್ಲಿ ಮಾಲೀಕ ವರ್ಗದ ಪ್ರತಿನಿಧಿಗಳು, ಈಗಾಗಲೇ ಎಲ್ಲಾ ಸಂಸ್ಥೆಗಳು ಲಾಕ್‌ಡೌನ್ ಅವಧಿಗೆ ಪೂರ್ಣ ವೇತನವನ್ನು ನೌಕರರಿಗೆ ಪಾವತಿಸಿದ್ದು, ಹೊಸ ಬೇಡಿಕೆ ಆದೇಶಗಳು ಇಲ್ಲದಿರುವುದರಿಂದ ಹಾಗೂ ಉತ್ಪಾದನಾ ಕಾರ್ಯವು ಪೂರ್ಣ ಪ್ರಮಾಣದಲ್ಲಿ ನಡೆಯುತ್ತಿಲ್ಲವಾದ ಕಾರಣ ವೇತನ ಪಾವತಿಸುವುದೇ ಕಷ್ಟವಾಗಿರುವುದಾಗಿ ಹಾಗೂ ಅನೇಕ ಸಂಸ್ಥೆಗಳು ಈಗಾಗಲೇ ಸಾಲದ ಸಮಸ್ಯೆಯನ್ನು ಎದುರಿಸುತ್ತಿದ್ದು, ಆರ್ಥಿಕ ಸಂಕಷ್ಟದಿಂದ ಸಂಸ್ಥೆಯನ್ನು ಮುಚ್ಚುವ ಸ್ಥಿತಿ ಎದುರಾಗಿರುವುದಾಗಿ ತಿಳಿಸುತ್ತಾ,ಈ ಹಿನ್ನೆಲೆಯಲ್ಲಿ ಒಂದು ವರ್ಷದ ಅವಧಿಗೆ (2020-21) ವಿಡಿಎ ಪಾವತಿಸುವುದನ್ನು ಮುಂದೂಡಿ, ಉದ್ದಿಮೆಗಳ ಚೇತರಿಕೆಗೆ ಅನುಕೂಲ ಮಾಡಿಕೊಡಬೇಕೆಂದು ಕೋರಿರುತ್ತಾರೆ.

ಕಾರ್ಮಿಕರ ಪರ ವಿವಿಧ ಸಂಘಟನೆಗಳ ಪ್ರತಿನಿಧಿಗಳು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸುತ್ತಾ, ಕೋವಿಡ್ -19ನ ಪ್ರಸ್ತುತ ಪರಿಸ್ಥಿತಿಯಲ್ಲಿ ಉದ್ದಿಮೆಗಳು ಸರ್ಕಾರದಿಂದ ಬಡ್ಡಿ ವಿನಾಯಿತಿ, ಜಿ.ಎಸ್.ಟಿ ವಿನಾಯಿತಿ ಇತ್ಯಾದಿ ಆರ್ಥಿಕ ಸೌಲಭ್ಯಗಳನ್ನು ಪಡೆಯುವುದರ ಮೂಲಕ ಆರ್ಥಿಕ ಸಮಸ್ಯೆಯನ್ನು ಪರಿಹರಿಸಿಕೊಳ್ಳಬಹುದಾಗಿದೆ. ಕನಿಷ್ಠ ವೇತನ ಎಂದರೆ ಮೂಲ ವೇತನ ಮತ್ತು ತುಟ್ಟಿಭತ್ಯೆ ಆಗಿದ್ದು, ತುಟ್ಟಿಭತ್ಯೆಯನ್ನು ತಡೆ ಹಿಡಿದಲ್ಲಿ ಅದು ಕನಿಷ್ಠ ವೇತನ ಕಾಯ್ದೆಗೆ ವಿರುದ್ಧವಾಗಿರುತ್ತದೆ. ಆದ್ದರಿಂದ ಸಂಸ್ಥೆಗಳು ತಮಗೆ ಆಗಿರುವ ನಷ್ಟದ ಹೊರೆಯನ್ನು ಕಾರ್ಮಿಕರ ಕನಿಷ್ಠ ವೇತನದ ಮೇಲೆ ಹೊರಿಸಬಾರದೆಂದು ಹಾಗೂ ಯಾವುದೇ ಕಾರಣಕ್ಕೂ ವ್ಯತ್ಯಸ್ಥ ತುಟ್ಟಿಭತ್ಯೆಯನ್ನು (ವಿಡಿಎ) ಪಾವತಿಸುವುದನ್ನು ಮುಂದೂಡಬಾರದೆಂದು ತೀವ್ರವಾಗಿ ವಿರೋಧಿಸಿರುತ್ತಾರೆ.

ಆದುದರಿಂದ, ಕೋವಿಡ್-19 ತುರ್ತು ಸಂದರ್ಭದ ಹಿನ್ನೆಲೆಯಲ್ಲಿ ಘೋಷಿಸಲಾಗಿದ್ದ ಲಾಕ್ ಡೌನ್ ಅವಧಿಗೆ ವೇತನವನ್ನು ನೀಡಬೇಕೆಂದು ಕೇಂದ್ರ ಸರ್ಕಾರದ ಮಾರ್ಗಸೂಚಿಗಳಲ್ಲಿ ತಿಳಿಸಿದ್ದು, ಕಾರ್ಮಿಕರಿಗೆ ನೀಡಲಾಗುವ ಕನಿಷ್ಠ ವೇತನದ ಒಟ್ಟು ಮೊತ್ತದಲ್ಲಿ ವಿ.ಡಿ.ಎ.ಯು ಸಹ ಸೇರಿದ್ದು, ತುರ್ತು ಪರಿಸ್ಥಿತಿಯ ಈ ಸಂದರ್ಭದಲ್ಲಿ ದಿನಾಂಕ: 01-04-2020 ರಿಂದ ಪಾವತಿಸಬೇಕಾಗಿರುವ ವಿಡಿಎ ಮೊತ್ತವನ್ನು ಮುಂದೂಡುವ ಕೋರಿಕೆಯನ್ನು ಪರಿಗಣಿಸಬಹುದಾಗಿದೆ ಎಂದು ಕಾರ್ಮಿಕ ಆಯುಕ್ತರು ಪ್ರಸ್ತಾವನೆಯಲ್ಲಿ ತಿಳಿಸಿರುತ್ತಾರೆ.

ಅದರಂತೆ, ಕಾರ್ಮಿಕರ ಆಯುಕ್ತರು, ಬೆಂಗಳೂರು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಾಇ 72 ಎಲ್ ಡಬ್ಲ್ಯೂ ಎ 2020, ಬೆಂಗಳೂರು ದಿನಾಂಕ: 20-07-2020**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೋವಿಡ್-19 ತುರ್ತು ಸಂದರ್ಭದ ಹಿನ್ನೆಲೆಯಲ್ಲಿ ಘೋಷಿಸಲಾಗಿದ್ದ ಲಾಕ್‌ಡೌನ್ ಅವಧಿಗೆ ವೇತನವನ್ನು ನೀಡಬೇಕೆಂದು ಕೇಂದ್ರ ಸರ್ಕಾರದ ಮಾರ್ಗಸೂಚಿಗಳಲ್ಲಿ ತಿಳಿಸಲಾಗಿದ್ದು, ಕಾರ್ಮಿಕರಿಗೆ ನೀಡಲಾಗುವ ಕನಿಷ್ಠ ವೇತನದ ಒಟ್ಟು ಮೊತ್ತದಲ್ಲಿ ವಿ.ಡಿ.ಎ. ಯು ಸಹ ಸೇರಿದೆ. ಆದರೆ, ತುರ್ತು ಪರಿಸ್ಥಿತಿಯ ಈ ಸಂದರ್ಭದಲ್ಲಿ ಉದ್ಯೋಗದಾತರ ಹಿತರಕ್ಷಣೆಯನ್ನು ಪರಿಗಣಿಸಿ, ದಿನಾಂಕ: 01-04-2020 ರಿಂದ 31-03-2021ರವರೆಗೆ ಪಾವತಿಸಬೇಕಾಗಿರುವ ವಿಡಿಎ ಮೊತ್ತವನ್ನು ಮುಂದೂಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

A. Umadevi 20/7/2020
(ಎ. ಉಮಾದೇವಿ)
ಪೀಠಾಧಿಕಾರಿ-2,
ಕಾರ್ಮಿಕ ಇಲಾಖೆ.

ಇವರಿಗೆ,

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಈ ಆದೇಶವನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಸದರಿ ಪ್ರಕಟಣೆಯ 200 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು-1 ಇವರಿಗೆ, ಕಳುಹಿಸುವಂತೆ ಕೋರಲಾಗಿದೆ.

ಇವರಿಗೆ:

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
2. ಸಂಬಂಧಪಟ್ಟ ಉದ್ಯೋಗದಾತರುಗಳು ಹಾಗೂ ಕಾರ್ಮಿಕ ವರ್ಗದ ಪ್ರತಿನಿಧಿಗಳು (ಕಾರ್ಮಿಕ ಆಯುಕ್ತರ ಮೂಲಕ)
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ. (ಕಾರ್ಮಿಕ ಆಯುಕ್ತರ ಮೂಲಕ)
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ).
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಟ ವೇತನ ಸಲಹಾ ಮಂಡಳಿ, ಕಾರ್ಮಿಕ ಆಯುಕ್ತರ ಕಚೇರಿ, ಕಾರ್ಮಿಕ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ).

ಪ್ರತಿಗಳನ್ನು ಮಾಹಿತಿಗಾಗಿ:

1. ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ.
4. ಸರ್ಕಾರದ ಉಪ ಕಾರ್ಯದರ್ಶಿ-1ರವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ.
5. ಸರ್ಕಾರದ ಉಪ ಕಾರ್ಯದರ್ಶಿ-2ರವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ.
6. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.